ಜಂಟಿ ನಿರ್ದೇಶಕರು (ನಗರ ಯೋಜನೆ–ಉತ್ತರ) ಸಂ. CC/06/19-20 ದಿನಾಂಕ 25/4/19 ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002**

ಸಂಖ್ಯೆ: JDTP(N)/LP/25/2010-11 ದಿನಾಂಕ: 25–04–2019.

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ. 6/l, ವಾರ್ಡ್ ನಂ. 05, ಚೊಕ್ಕನಹಳ್ಳಿ ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 7 ರ ವಿಂಗ್ ಎ ಮತ್ತು ಬಿ ಹಾಗೂ ಬಿಲ್ಡಿಂಗ್ – 6 ರಲ್ಲಿನ ವಿಂಗ್ ಜಿ, ಹೆಚ್ ಮತ್ತು ಜೆ ರ ವಸತಿ ಸಮುಚ್ಚಯ ಉಪಯೋಗದ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ಪ್ರಾರಂಭಿಕ ಪ್ರಮಾಣಪತ್ರ ಕೋರಲಾದ ತಮ್ಮ ಮನವಿ ಪತ್ರ ದಿನಾಂಕ: 23–03–2017, 30–08–2017 ಮತ್ತು 11–03–2019.
2) ನಕ್ಷೆ ಮಂಜೂರಾತಿ ಸಂಖ್ಯೆ: JDTP(N)/LP/25/2010-11, ದಿನಾಂಕ: 31–08–2015.

* * * * * * *

ಆಸ್ತಿ ಸಂಖ್ಯೆ. 6/l, ವಾರ್ಡ್ ನಂ. 05, ಚೊಕ್ಕನಹಳ್ಳಿ ಗ್ರಾಮ, ಯಲಹಂಕ ಹೋಬಳಿ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ಬಿಲ್ಡಿಂಗ್ – 7 ರ ವಿಂಗ್ ಎ ಮತ್ತು ಬಿ ರಲ್ಲಿ 3ತಳ+ನೆಲ+ಮೇಲಿನ 33 ಅಂತಸ್ತುಗಳು ಹಾಗೂ ಬಿಲ್ಡಿಂಗ್ – 6 ರಲ್ಲಿನ ವಿಂಗ್ ಹೆಚ್ ಮತ್ತು ಜೆ ರಲ್ಲಿ 3 ತಳ + ನೆಲ + ಮೇಲಿನ 33 ಅಂತಸ್ತುಗಳು ಹಾಗೂ ವಿಂಗ್ – ಜಿ ರಲ್ಲಿ 3ತಳ+ನೆಲ+ಮೇಲಿನ 28 ಅಂತಸ್ತುಗಳ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಉಲ್ಲೇಖ (2) ರಂತೆ ಈ ಕಛೇರಿಯಿಂದ ದಿನಾಂಕ: 31–08–2018 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (1) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಕಟ್ಟಡ ನಿರ್ಮಾಣದ ಸ್ಥಳವನ್ನು ದಿನಾಂಕ: 14–03–2019 ರಂದು ಪರಿಶೀಲಿಸಲಾಗಿದ್ದು, ಮಂಜೂರಾತಿ ನಕ್ಷೆಯಂತೆ ಅಗತ್ಯ ನಡುಜಾಗಗಳನ್ನು ಬಿಟ್ಟು 3ತಳ+ನೆಲ+ಮೇಲಿನ 16ನೇ ಅಂತಸ್ತು ನಿರ್ಮಾಣ ಕಾರ್ಯ ಪ್ರಗತಿಯಲ್ಲಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 09–04–2019 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ಹಾಗೂ ಪ್ರಾರಂಭಿಕ ಪ್ರಮಾಣಪತ್ರ ಪಡೆಯದೇ ನಿರ್ಮಿಸಿರುವ ಕಟ್ಟಡದ ಭಾಗಕ್ಕೆ ದಂಡ ಶುಲ್ಕ ಸೇರಿ ಒಟ್ಟು ಶುಲ್ಕ **ರೂ. 45,10,000/–** ಗಳಿಗೆ ಡಿ.ಡಿಯನ್ನು ಸಲ್ಲಿಸಿದ್ದು, ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000030 ದಿನಾಂಕ: 24–04–2019 ರಲ್ಲಿ ಸಂಬಂಧಿಸಿದ ಲೆಕ್ಕ ಶೀರ್ಷಿಕೆಗೆ ಸಂದಾಯ ಮಾಡಿಕೊಳ್ಳಲಾಗಿದೆ. ಆದುದರಿಂದ ಉಲ್ಲೇಖ (2) ರಲ್ಲಿ ನಕ್ಷೆ ಮಂಜೂರಾತಿ ನೀಡಲಾದ ಬಿಲ್ಡಿಂಗ್ – 7 ರ ವಿಂಗ್ ಎ ಮತ್ತು ಬಿ ಹಾಗೂ ಬಿಲ್ಡಿಂಗ್ – 6 ರಲ್ಲಿನ ವಿಂಗ್ ಜಿ, ಹೆಚ್ ಮತ್ತು ಜೆ ರ ವಸತಿ ಸಮುಚ್ಚಯ ಉಪಯೋಗದ ಕಟ್ಟಡ ನಿರ್ಮಾಣಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.

2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.

3. ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5. ವಿವಿಧ ಇಲಾಖೆಗಳಿಂದ ನೀಡಿರುವ ನಿರಾಪೇಕ್ಷಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತನ್ನು ಪಾಲಿಸತಕ್ಕದ್ದು.

ಸಹಿ /-

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,

ಮೆ॥ ಭಾರತೀಯ ಸಿಟಿ ಡೆವಲಪರ್ಸ್ ಪ್ರೈ.ಲಿ.,
ನಂ.1/5, ಪ್ಯಾಲೇಸ್ ರಸ್ತೆ,
ಬೆಂಗಳೂರು – 560001.

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) / ಸಹಾಯಕ ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ಉಪ-ವಿಭಾಗ) ರವರಿಗೆ ಮಾಹಿತಿಗಾಗಿ.
2. ಕಛೇರಿ ಪ್ರತಿ.

B.R. Muddaki 25/4/19

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

25/4/19 25/4/19 25/4/19